## 9. ಅಂತ್ಯಕ್ರಿಯೆಗೆ ಅಡ್ಡಿಪಡಿಸಿದರೆ ಜೈಲು

ಕೋವಿಡ್–19ರಿಂದ ಮೃತಪಟ್ಟ ರೋಗಿಯ ಅಂತ್ಯಕ್ರಿಯೆಗೆ ಅಡ್ಡಿಪಡಿಸುವುದು ಅಥವಾ ಅಡ್ಡಿಪಡಿಸಲು ಪ್ರಯತ್ನಿಸುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಕನಿಷ್ಠ ಒಂದು ವರ್ಷದಿಂದ ಮೂರು ವರ್ಷದವರೆಗೆ ಜೈಲು ಶಿಕ್ಷೆ ವಿಧಿಸುವುದಾಗಿ ತಮಿಳುನಾಡು ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿದೆ.

ಸೋಂಕಿನಿಂದ ಮೃತಪಟ್ಟ ರೋಗಿಗಳ ಅಂತ್ಯಕ್ರಿಯೆಗೆ ರಾಜ್ಯದ ಹಲವೆಡೆ ಅಡ್ಡಿ ಪಡಿಸಿದ ಘಟನೆಗಳು ವರದಿಯಾದ ಬೆನ್ನಲ್ಲೇ ಸರ್ಕಾರ ಈ ನಿರ್ಧಾರಕ್ಕೆ ಬಂದಿದೆ. ಶವವನ್ನು ಹೂಳುವುದರಿಂದ ವೈರಸ್ ಹರಡುತ್ತದೆ ಎನ್ನುವ ತಪ್ಪು ಕಲ್ಪನೆಯಿಂದಾಗಿ ಏಪ್ರಿಲ್–19ರಂದು ಕೋವಿಡ್–19 ರಿಂದ ಮೃತಪಟ್ಟ ವೈದ್ಯ ಡಾ:ಸೈಮನ್ ಹರ್ಕ್ಯುಲಿಸ್ ಶವವನ್ನು ಹೂಳುವುದನ್ನು ವಿರೋಧಿಸಿ ಪ್ರತಿಭಟನೆ ನಡೆದಿತ್ತು. ಈ ಸಂದರ್ಭದಲ್ಲಿ ಪ್ರತಿಭಟನಕಾರರು ಆರೋಗ್ಯ ಕಾರ್ಯಕರ್ತರು ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿದ್ದರು.

ಆಧಾರ:ಪ್ರಜಾವಾಣಿ, ದಿನಾಂಕ:27.04.2020